# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

14

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE : 30/12/20

## ‘ಗೋಹತ್ಯೆ ನಿಷೇಧ ಕಾಯ್ದೆಯ ಕಟ್ಟುನಿಟ್ಟಿನ ಜಾರಿಗೆ ಸಿದ್ಧತೆ’

ಪ್ರ.ವಾ. 30-12-20

‘ಗೋಹತ್ಯೆ ನಿಷೇಧ ಕಾಯ್ದೆಯ ಕಟ್ಟುನಿಟ್ಟಿನ ಜಾರಿಗೆ ಸಿದ್ಧತೆ ಮಾಡಲಾಗಿದೆ. ರಾಜ್ಯದಲ್ಲಿ 159 ಗೋಶಾಲೆಗಳಿದ್ದು, ಅವುಗಳ ಮೂಲಕ ವಯಸ್ಸಾದ ಗೋವುಗಳನ್ನು ಸಾಕಲಾಗುವುದು’ ಎಂದು ಪಶು ಸಂಗೋಪನಾ ಸಚಿವ ಪ್ರಭು ಚವ್ಹಾಣ್ ತಿಳಿಸಿದ್ದಾರೆ. ‘ಸುಗ್ರೀವಾಜ್ಞೆ ಜಾರಿಯಿಂದ ಯಾವುದೇ ವ್ಯಕ್ತಿಯ ಆಹಾರದ ಹಕ್ಕಿಗೆ ತೊಂದರೆ ಆಗುವುದಿಲ್ಲ. ವಿರೋಧ ಪಕ್ಷದ ನಾಯಕರು ರಾಜಕೀಯ ನಾಟಕ ಮಾಡುತ್ತಿದ್ದಾರೆ. ರಾಜಕೀಯ ಕಾರಣಕ್ಕಾಗಿ ಹೊಸ ಕಾಯ್ದೆಯನ್ನು ವಿರೋಧಿಸುವುದು ಸರಿಯಲ್ಲ’ ಎಂದು ಹೇಳಿದ್ದಾರೆ.

ಕಾಯ್ದೆ ಜಾರಿಗೆ ವ್ಯಾಪಕ ಸಿದ್ಧತೆ ಮಾಡಲಾಗಿದೆ. ಹೊಸ ಗೋಶಾಲೆಗಳನ್ನು ಆರಂಭಿಸುವುದು, ಮೇವು ಸಂಗ್ರಹಣೆ ಸೇರಿದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ, ತಹಶೀಲ್ದಾರ್‌ಗಳಿಗೆ ಸೂಚಿಸಲಾಗಿದೆ. ಪ್ರಾಣಿ ಕಲ್ಯಾಣ ಮಂಡಳಿಯ ಮೂಲಕ ನಿಗಾ ಇಡುವುದಕ್ಕೂ ಸಿದ್ಧತೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

Bengaluru